# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 112**
**ವಿಧಾನ ಪರಿಷತ್ತಿನ ಸದಸ್ಯರು : ಶ್ರೀ ಪ್ರತಾಪ್‌ಸಿಂಹ ನಾಯಕ್ ಕೆ**
**(ವಿಧಾನಸಭೆಯಿಂದ ಚುನಾಯಿತರಾದವರು)**

**ಉತ್ತರಿಸುವ ದಿನಾಂಕ : 14.02.2024**

**ಉತ್ತರಿಸುವ ಸಚಿವರು : ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯ ಕಡಬ ತಾಲ್ಲೂಕಿನ ಕೊಯ್ಲಾದಲ್ಲಿನ ಪಶುಸಂಗೋಪನಾ ಕಾಲೇಜಿನಲ್ಲಿ ಶೈಕ್ಷಣಿಕ ಚಟುವಟಿಕೆಗಳು ಈಗಾಗಲೇ ಪ್ರಾರಂಭಗೊಂಡಿವೆಯೇ; | ಇಲ್ಲ. |
| ಆ) | ಪ್ರಾರಂಭಗೊಂಡಿದ್ದಲ್ಲಿ ಸದರಿ ಕಾಲೇಜಿಗೆ ಬೇಕಾಗಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಈಗಾಗಲೇ ಒದಗಿಸಲಾಗಿದೆಯೇ; (ವಿವರ ನೀಡುವುದು) | ಭಾರತೀಯ ಪಶುವೈದ್ಯಕೀಯ ಪರಿಷತ್ತಿನ ನಿಯಮಾವಳಿ 2016 ರ ಪ್ರಕಾರ ಪಶುವೈದ್ಯಕೀಯ ಮಹಾವಿದ್ಯಾಲಯ ಪ್ರಾರಂಭಿಸಬೇಕಾದರೆ ಅಗತ್ಯವಿರುವ ಕಟ್ಟಡ, ಮೂಲಭೂತ ಸೌಕರ್ಯ ಮತ್ತು ಸಿಬ್ಬಂದಿಗಳ ಅವಶ್ಯಕತೆ ಇರುತ್ತದೆ. ಈ ನಿಟ್ಟಿಯಲ್ಲಿ ಮೊದಲನೇ ಹಂತದಲ್ಲಿ ಪಶುವೈದ್ಯಕೀಯ ಮಹಾ ವಿದ್ಯಾಲಯದ ಕಟ್ಟಡ, ಆಸ್ಪತ್ರೆ, ಅತಿಥಿ ಗೃಹ, ವಿದ್ಯಾರ್ಥಿನಿಯರ ವಸತಿ ನಿಲಯ ಮತ್ತು ವಿದ್ಯಾರ್ಥಿನಿಯರ ವಸತಿ ನಿಲಯದ ಕಾಮಗಾರಿ ಪೂರ್ಣಗೊಂಡಿದ್ದು ಕರ್ನಾಟಕ ಗೃಹ ಮಂಡಳಿ ಬೆಂಗಳೂರು ವತಿಯಿಂದ ಜೂನ್ 2023 ರಲ್ಲಿ ವಿಶ್ವವಿದ್ಯಾಲಯಕ್ಕೆ ಹಸ್ತಾಂತರ ಮಾಡಿದ್ದು ಇನ್ನೂ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕಾಗಿರುತ್ತದೆ. |
| ಇ) | ಇದುವರೆಗೂ ಒದಗಿಸದಿದ್ದಲ್ಲಿ, ಇನ್ನೂ ಒದಗಿಸಲು ಬಾಕಿ ಉಳಿದಿರುವ ಮೂಲಭೂತ ಸೌಕರ್ಯಗಳ ವಿವರಗಳೇನು; (ವಿವರ ನೀಡುವುದು) | ಕೊಯ್ಲಾ ಗ್ರಾಮದಲ್ಲಿ ನಿರ್ಮಾಣವಾಗುತ್ತಿರುವ ಪಶುವೈದ್ಯಕೀಯ ಮಹಾವಿದ್ಯಾಲಯದ 2ನೇ ಹಂತದ ಕಾಮಗಾರಿಗಳಿಗೆ ರೂ.9.77 ಕೋಟಿಗಳ ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆಯನ್ನು ದಿನಾಂಕ 06.01.2024 ರಂದು ನೀಡಲಾಗಿರುತ್ತದೆ.<br><br>ಎರಡನೇ ಹಂತದಲ್ಲಿ ಬಾಕಿ ಉಳಿದ ಕಾಮಗಾರಿಗಳಾದ |

| | | |
|---|---|---|
| | | ಗ್ರಂಥಾಲಯ, ವಿವಿಧ ಪ್ರಾಣಿಗಳ ಸಾಕಣೆ ಕೇಂದ್ರಗಳು, ಸಿಬ್ಬಂದಿಗಳ ವಸತಿ ಸಮುಚ್ಚಯ, ಸಭಾಂಗಣ, ಒಳರಸ್ತೆಗಳು ರೈತರ ತರಬೇತಿ ಕೇಂದ್ರ, ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರ ವಸತಿ ನಿಲಯ, ಡೀನ್ ರವರ ಅತಿಥಿ ಗೃಹ, Student utility center, Type A, B, C & Type D Quarters, International Hostel, Internal Connecting Roads, Compound Wall, Main Gate ಹಾಗೂ ಇತರೆ ಮೂಲಭೂತ ಸೌರ್ಕಯಗಳನ್ನು ರೂ.206.35 ಕೋಟಿಗಳ ಮೊತ್ತದಲ್ಲಿ ಒದಗಿಸುವ ಸಂಬಂಧ, ಆಡಳಿತಾತ್ಮಕ ಮಂಜೂರಾತಿ ನೀಡುವ ಕುರಿತ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ. |
| ಈ) | ಯಾವ ಕಾಲಮಿತಿಯೊಳಗೆ ಬಾಕಿ ಉಳಿದಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು. | ಮೂಲಭೂತ ಸೌಕರ್ಯಗಳಿಗೆ ಆಡಳಿತಾತ್ಮಕ ಅನುಮೋದನೆ ದೊರೆತ ನಂತರ ಮೂಲಭೂತ ಸೌಕರ್ಯ ಒದಗಿಸಲು ಅಗತ್ಯ ಕ್ರಮ ಜರುಗಿಸಲಾಗುವುದು. |

**ಸಂಖ್ಯೆ: ಪಸಂಮೀ ಇ-36 ಪಅಸೇ 2024**

**(ಕೆ. ವೆಂಕಟೇಶ್)**
**ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು**